

ಅರುಣ ಪಿ. ಭಟ್ಟ

## ವಾರಭವಿಷ್ಯ 7.5.2020ರಿಂದ 13.5.2020ರವರೆಗೆ




ನೀವು ಕೈಗೊಳ್ಳುವ ಕೆಲಸದಿಂದ ವಿಶ್ವಾಸಾರ್ಹತೆ ಹೆಚ್ಚಾಗುತ್ತದೆ. ಆದರೆ ಕೆಲವರು ನಿಮ್ಮನ್ನು ಅವಮಾನಕ್ಕೆ ಗುರಿ ಮಾಡಲಿದ್ದಾರೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆರೋಗ್ಯ ಉತ್ತಮವಾಗುತ್ತದೆ. ಸಂತೋಷವಾಗಿ ಸಮಯ ಕಳೆಯಲಿದ್ದೀರಿ. ನಿಮ್ಮ ಕೆಲಸದ ಜತೆಜತೆಗೆ ಆಹಾರ ಪಥ್ಯದ ಬಗ್ಗೆಯೂ ಕಾಳಜಿ ತೆಗೆದುಕೊಳ್ಳುತ್ತೀರಿ. ವ್ಯಾಪಾರಸ್ಥರಿಗೆ ಉತ್ತಮ ಲಾಭ. ಶುಭದಿನ **11**. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ನಿಮ್ಮ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುವವರ ಸಂಖ್ಯೆ ಹೆಚ್ಚಾಗುತ್ತದೆ. ವಾರದ ದ್ವಿತೀಯಾರ್ಧದಲ್ಲಿ ಕೆಲಸ ಕಾರ್ಯಗಳಲ್ಲಿ ತೊಂದರೆ ಎದುರಾಗುತ್ತದೆ. ಕೆಲಸಗಾರರು ಸಮಯಕ್ಕೆ ಸಿಗದಿರುವುದು ಇಂಥ ಕಾರಣಗಳಿಗೆ ತೊಂದರೆ ಆಗುತ್ತದೆ. ಇಂಥ ತೊಂದರೆಗಳನ್ನು ತಡೆಯುವ ಸಲುವಾಗಿ ನೀವು ಭಾರೀ ಶ್ರಮ ಹಾಕುತ್ತೀರಿ. ಕೋರ್ಟ್ ಕೇಸುಗಳಲ್ಲಿ ಸಮಸ್ಯೆಗಳನ್ನು ಎದುರಿಸುತ್ತೀರಿ. ಶುಭದಿನ **14**. ಕಾಲಭೈರವನ ಸೇವೆ ಮಾಡಿರಿ.




ವಾರದ ಆರಂಭದಿಂದಲೇ ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕಾಗುತ್ತದೆ. ಸಂಬಂಧಿಕರ ಜತೆಗೆ ಉತ್ತಮ ಸಮಯ ಕಳೆಯುವ ಸಾಧ್ಯತೆ ಇದೆ. ಈ ವಾರ ಸ್ವಲ್ಪ ಹೆಚ್ಚೇ ಹಣ ಖರ್ಚು ಮಾಡಬೇಕಾಗುತ್ತದೆ. ತಲೆನೋವು ಹಲ್ಲುನೋವು ಕಾಡಬಹುದು. ವ್ಯಾಪಾರ ವ್ಯವಹಾರಗಳಲ್ಲಿ ನಿಮಗೆ ಅನುಕೂಲಕರ ಸನ್ನಿವೇಶ ಇರುತ್ತದೆ. ಸೋದರ ಸಂಬಂಧಿಗಳ ಜತೆಗೆ ಜಗಳ ಸಾಧ್ಯತೆ. ಶುಭದಿನ **12**. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.




ಮಾರಾಟ ಕ್ಷೇತ್ರದಲ್ಲಿ ಇರುವವರು ತಮ್ಮ ಆಕರ್ಷಕ ಹಾಗೂ ಹೊಸ ಉತ್ಪನ್ನಗಳನ್ನು ಮಾರುಕಟ್ಟೆಯಲ್ಲಿ ಮಾರಾಟ ಮಾಡಲು ಸಕಾಲ. ವಿವಾಹ ವಯಸ್ಕ ಮಗ ಅಥವಾ ಮಗಳು ಇದ್ದಲ್ಲಿ ಅವರ ಮದುವೆ ವಿಚಾರವಾಗಿ ಸಂಬಂಧಿಕರ ಜತೆಗೆ ಮಾತುಕತೆ ನಡೆಸಲಿದ್ದೀರಿ. ಆರೋಗ್ಯ ಸಮಸ್ಯೆಗಳು ನಿಮ್ಮನ್ನು ಕಾಡಬಹುದು. ವಾರದ ಕೊನೆಗೆ ಅನುಕೂಲಕರ. ಶುಭದಿನ **14**. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಕ್ಕೆ ವೇಗ ನೀಡಲು ಬಹಳ ಪ್ರಯತ್ನ ಮಾಡುತ್ತೀರಿ. ನೀವು ಹಾಕಿದ ಶ್ರಮಕ್ಕೆ ತಕ್ಕ ಪ್ರತಿಫಲವನ್ನು ಪಡೆಯಲಿದ್ದೀರಿ. ಇತರರ ಸಮಸ್ಯೆಗಳನ್ನು ಬಗೆಹರಿಸಲು ಹೊಸ ದಾರಿಗಳನ್ನು ಸೂಚಿಸುತ್ತೀರಿ. ಹಲವರ ಜತೆಗೆ ಏಕ ಕಾಲಕ್ಕೆ ಸಂಪರ್ಕ ಸಾಧಿಸುತ್ತೀರಿ. ಈ ಅವಧಿಯಲ್ಲಿ ನಿಮ್ಮ ಆರೋಗ್ಯವು ಉತ್ತಮವಾಗಿ ಇರುತ್ತದೆ. ಶುಭದಿನ **16**. ಲಿಂಗಾಷ್ಟಕ ಪಠಣ ಮಾಡಿರಿ.




ನಿಮ್ಮ ವಿವೇಚನೆಯನ್ನು ಸಮರ್ಥವಾಗಿ ಬಳಸುವ ಮೂಲಕ ವ್ಯಾಪಾರ ವ್ಯವಹಾರವನ್ನು ಇನ್ನಷ್ಟು ಉತ್ತಮವಾಗಿ ಮಾಡುತ್ತೀರಿ. ಇನ್ನು ಈ ಅವಧಿಯಲ್ಲಿ ಕುಟುಂಬ ಸದಸ್ಯರ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ಉದ್ಯೋಗಸ್ಥರಿಗೆ ಉದ್ಯೋಗ ಸ್ಥಳದಲ್ಲಿ ಸಹೋದ್ಯೋಗಿಗಳ ಜತೆಗೆ ಉದ್ವಿಗ್ನವಾದ ಸನ್ನಿವೇಶ ಎದುರಾಗುತ್ತದೆ. ನೀವು ವಿಶ್ವಾಸಾರ್ಹತೆ ಗಳಿಸುತ್ತೀರಿ. ಶುಭದಿನ **11**. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಈ ವಾರ ಕೌಟುಂಬಿಕ ಹಾಗೂ ವೈಯಕ್ತಿಕ ಸಮಸ್ಯೆಗಳ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಿ. ಸಣ್ಣ ವಿಚಾರ ಕೂಡ ದೊಡ್ಡ ಬಿಕ್ಕಟ್ಟಾಗಿ ಎದ್ದು ನಿಲ್ಲುವ ಸಾಧ್ಯತೆ ಇದೆ. ಕೌಟುಂಬಿಕ ವಿಚಾರದಲ್ಲಿ ಕ್ರಮೇಣ ಪ್ರಗತಿ. ವಾರದ ದ್ವಿತೀಯಾರ್ಧದಲ್ಲಿ ದಾನ ಧರ್ಮ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುತ್ತೀರಿ. ವಾರದ ಅಂತ್ಯಕ್ಕೆ ಉತ್ತಮ ಫಲಿತಾಂಶ ದೊರೆಯಲಿದೆ. ಶುಭದಿನ **15**. ಸೌಂದರ್ಯ ಲಹರಿ ಪಠಿಸಿರಿ.




ವಾರದ ಮೊದಲ ಭಾಗದಿಂದಲೇ ಆರೋಗ್ಯವಾಗಿ ಇರುತ್ತೀರಿ. ಬಹಳ ಮುಖ್ಯವಾದ ವ್ಯವಹಾರವೊಂದರ ಭಾಗೀದಾರರಾಗಿ ಅಥವಾ ನೀವೇ ಮುಖ್ಯ ಸ್ಥಾನಕ್ಕೆ ನೇಮಕ ಸಾಧ್ಯತೆ ಇದೆ. ರಾಜಕಾರಣಿಗಳು ಹೆಚ್ಚಿನ ಜವಾಬ್ದಾರಿ ವಹಿಸಿಕೊಳ್ಳಬೇಕಾಗುತ್ತದೆ. ಉದ್ಯೋಗ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವಾರದ ಅಂತ್ಯ ಭಾಗದಲ್ಲಿ ವರ್ಗಾವಣೆ ಆಗುವ ಸಾಧ್ಯತೆ ಇದೆ. ಶುಭದಿನ **12**. ಲಕ್ಷ್ಮೀ ನಾರಾಯಣ ಹೃದಯ ಪಠಿಸಿರಿ.




ವಾರದ ಶುರುವಿನಿಂದಲೇ ವ್ಯಾಪಾರಸ್ಥರು ಉದ್ಯೋಗಸ್ಥರು ತಮ್ಮ ವ್ಯಾಪಾರ ಉದ್ಯಮದ ಪ್ರಗತಿಯ ಪರಿಶೀಲನೆ ಮಾಡುವುದರಲ್ಲಿ ಸಕ್ರಿಯರಾಗುತ್ತೀರಿ. ನಿಮ್ಮ ಕಾರ್ಯಗಳನ್ನು ಈ ಹಿಂದೆಂದಿಗಿಂತಲೂ ವೇಗವಾಗಿ ಮಾಡಲಿದ್ದೀರಿ. ಮನಸಿನಲ್ಲಿ ಇರುವ ವಿಚಾರವನ್ನು ನೇರವಾಗಿ ಹೇಳಲು ಪ್ರಯತ್ನಿಸಿ. ವಾರದ ಅಂತ್ಯಕ್ಕೆ ಉದ್ಯೋಗದ ಕಡೆಗೆ ಗಮನ ಹೆಚ್ಚಾಗುತ್ತದೆ. ಶುಭದಿನ **12**. ವಿಷ್ಣು ಸಹಸ್ರನಾಮ ಓದಿರಿ.




ಈ ವಾರ ಬಹಳ ಸಂತೋಷವಾಗಿ ಇರುತ್ತೀರಿ. ಆದಾಯಕ್ಕೆ ಸಂಬಂಧಿಸಿದ ಮೂಲಗಳಿಂದ ಉತ್ತಮ ಲಾಭ ಪಡೆಯುವ ಅವಕಾಶ ಇದೆ. ಇದರಿಂದ ಹೆಚ್ಚು ಉತ್ಸಾಹಭರಿತರಾಗಿ, ಉಲ್ಲಸಿತರಾಗಿ ಕಾಣಿಸಿಕೊಳ್ಳಲಿದ್ದೀರಿ. ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಯಶಸ್ಸು ಪಡೆಯುವ ಅವಕಾಶಗಳು ದೊರೆಯಲಿವೆ. ಸಾಧನೆ ಮಾಡಲು ಅವಕಾಶ ದೊರೆಯಲಿದೆ. ಶುಭದಿನ **14**. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಶುರುವಿನಿಂದಲೇ ಉದ್ಯೋಗ ಕ್ಷೇತ್ರದಲ್ಲಿ ಅದ್ಭುತವಾದ ಸಾಧನೆ ಮಾಡುವ ಅವಕಾಶಗಳಿವೆ. ನಿಮ್ಮ ಪಾಲಿಗೆ ದೊರೆಯುವ ಅವಕಾಶಗಳನ್ನು ಬಹಳ ಚೆನ್ನಾಗಿ ಬಳಸಿಕೊಳ್ಳಲಿದ್ದೀರಿ. ವ್ಯಾಪಾರಸ್ಥರು ಸ್ಥಳೀಯವಾಗಿ ವಿಶ್ವಾಸಾರ್ಹತೆಯನ್ನು ಹೆಚ್ಚಿಸಿಕೊಳ್ಳುತ್ತೀರಿ. ವಾರದ ಆರಂಭದಲ್ಲಿ ಆರೋಗ್ಯ ಉತ್ತಮವಾಗಿ ಇರುತ್ತದೆ. ಶುಭದಿನ **14**. ಸುಬ್ರಮಣ್ಯ ಜಪ ಮಾಡಿರಿ.




ಸಣ್ಣ ಪ್ರವಾಸ ಮಾಡಬೇಕಾಗಿ ಬರುತ್ತದೆ. ಸಂಸ್ಥೆಯೊಂದರ ಜತೆ ಮಹತ್ತರವಾದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆ ಇದೆ. ಮನೆ ಹಾಗೂ ಕುಟುಂಬದ ಬಗ್ಗೆ ಹೆಚ್ಚು ಯೋಚನೆ ಮಾಡಲಿದ್ದೀರಿ. ಶ್ವಾಸಕೋಶ ಸಮಸ್ಯೆ ಎದುರಾಗಬಹುದು. ವಾರದ ಮಧ್ಯದಿಂದ ಹಲವು ಒಳ್ಳೆ ಅವಕಾಶಗಳು ನಿಮ್ಮ ಪಾಲಿಗೆ ದೊರೆಯಲಿವೆ. ಆರೋಗ್ಯ ಉತ್ತಮವಾಗಿ ಇರುತ್ತದೆ. ಶುಭದಿನ **12**. ಶ್ರೀ ದುರ್ಗಾ ಆರಾಧನೆ ಮಾಡಿರಿ.